ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀ ಎಂ. ನಾರಾಯಣಸ್ವಾಮಿ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 248

ಉತ್ತರಿಸಬೇಕಾದ ದಿನಾಂಕ : 14.12.2021

ಉತ್ತರಿಸಬೇಕಾದ ಸಚಿವರು : ಸಹಕಾರ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಸಹಕಾರ ಇಲಾಖೆಯಿಂದ ರೈತರಿಗೆ ಸಾಲ ನೀಡುವಾಗ ಅನುಸರಿಸುವ ಅರ್ಹತೆ ಹಾಗೂ ಮಾನದಂಡಗಳೇನು?	ಸಹಕಾರ ಇಲಾಖೆಯಿಂದ ರೈತರಿಗೆ ಸಾಲ ನೀಡುವಾಗ ಅನುಸರಿಸುವ ಅರ್ಹತೆ ಹಾಗೂ ಮಾನದಂಡಗಳು: 1) **ರೂ. 3.00 ಲಕ್ಷಗಳವರೆಗೆ ಶೂನ್ಯ ಬಡ್ಡಿ ದರದಲ್ಲಿ ಅಲ್ಪಾವಧಿ ಬೆಳೆ ಸಾಲ ಮತ್ತು ಪಶುಸಂಗೋಪನೆ/ಮೀನುಗಾರಿಕೆ ಉದ್ದೇಶಗಳಿಗೆ ದುಡಿಯುವ ಬಂಡವಾಳವಾಗಿ ರೂ.2.00 ಲಕ್ಷಗಳವರೆಗೆ ಶೂನ್ಯ ಬಡ್ಡಿದರದ ಸಾಲದ ಯೋಜನೆ:** • ರೈತನು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಪಿಕಾರ್ಡ್ ಬ್ಯಾಂಕ್ ಅಥವಾ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳಲ್ಲಿ ಸದಸ್ಯತ್ವ ಹೊಂದಿರತಕ್ಕದ್ದು. • ರೈತರು ಪಹಣಿ ಮತ್ತು ಆಧಾರ್ ಕಾರ್ಡ್ ದಾಖಲೆಗಳೊಂದಿಗೆ ನಿಗದಿತ ನಮೂನೆಯಲ್ಲಿ ಸಂಬಂಧಿಸಿದ ಸಂಘಗಳಿಗೆ ಅರ್ಜಿ ಸಲ್ಲಿಸಬೇಕು. • ರೈತನು ವಾಸವಿರುವ ಸಂಘ ಅಥವಾ ಭೂಮಿ ಹೊಂದಿರುವ ಸಂಘ ಯಾವುದಾದರೂ ಒಂದು ಸಂಘದ ವ್ಯಾಪ್ತಿಯಲ್ಲಿ ಮಾತ್ರ ಸಾಲ ಪಡೆಯತಕ್ಕದ್ದು. • ಸದರಿ ಆರ್‌ಟಿಸಿ ಮೇಲೆ ಇತರೇ ಬ್ಯಾಂಕುಗಳಲ್ಲಿ ಬೆಳೆ ಸಾಲ ಪಡೆದಿರಬಾರದು. • ಈ ಯೋಜನೆಯು ಪಶುಸಂಗೋಪನೆ/ಮೀನುಗಾರಿಕೆ ಉದ್ದೇಶಗಳಿಗೆ ದುಡಿಯುವ ಬಂಡವಾಳ ಸಾಲಕ್ಕಾಗಿ ಗರಿಷ್ಠ ರೂ.2.00 ಲಕ್ಷಗಳಿಗೆ ಹಾಗೂ ಬೆಳೆ ಸಾಲ, ಪಶುಸಂಗೋಪನೆ ಮತ್ತು ಮೀನುಗಾರಿಕೆ ದುಡಿಯುವ ಬಂಡವಾಳದ ಸಾಲ ಒಟ್ಟುಗೂಡಿಸಿ ರೂ.3.00ಲಕ್ಷಗಳಿಗೆ ಮಾತ್ರ ಅನ್ವಯವಾಗುತ್ತದೆ. • ಬಡ್ಡಿ ಸಹಾಯಧನ ಜಿಲ್ಲಾ ಮಟ್ಟದ ತಾಂತ್ರಿಕ ಸಮಿತಿ ನಿಗದಿಪಡಿಸಿದ ಸ್ಕೇಲ್ ಆಫ್ ಫೈನಾನ್ಸ್ ಗೆ ಮಾತ್ರ ಲಭಿಸುತ್ತದೆ. • ರೈತನು ಸಂಘವು ನಿಗದಿಪಡಿಸಿದ ಗಡುವಿನ ದಿನಾಂಕದೊಳಗೆ ಅಸಲು ಮರುಪಾವತಿಸಬೇಕು.

		2) 10.00 ಲಕ್ಷಗಳವರೆಗೆ ಮಧ್ಯಮಾವಧಿ/ದೀರ್ಘಾವಧಿ ಕೃಷಿ ಸಾಲಗಳನ್ನು ಶೇಕಡ 3 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ: • ರೈತನು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಪಿಕಾರ್ಡ್ ಬ್ಯಾಂಕ್ ಅಥವಾ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳಲ್ಲಿ ಸದಸ್ಯತ್ವ ಹೊಂದಿರತಕ್ಕದ್ದು. • ಭೂಮಿ ದಾಖಲೆಗಳು, ಭದ್ರತೆಗೆ ಬೇಕಾದ ದಾಖಲೆಗಳು ಮತ್ತು ಯೋಜನಾ ವರದಿಯೊಂದಿಗೆ ನಿಗದಿತ ನಮೂನೆಯಲ್ಲಿ ಸಂಬಂಧಿಸಿದ ಸಂಘಗಳಿಗೆ ಅರ್ಜಿ ಸಲ್ಲಿಸಬೇಕು. • ರೈತನು ವಾಸವಿರುವ ಸಂಘ ಅಥವಾ ಭೂಮಿ ಹೊಂದಿರುವ ಸಂಘ ಯಾವುದಾದರೂ ಒಂದು ಸಂಘದ ವ್ಯಾಪ್ತಿಯಲ್ಲಿ ಮಾತ್ರ ಸಾಲ ಪಡೆಯತಕ್ಕದ್ದು. • ರೈತನು ಸಂಘವು ನಿಗದಿಪಡಿಸಿದ ಗಡುವಿನ ದಿನಾಂಕದೊಳಗೆ ಅಸಲು ಮತ್ತು ಶೇ.3 ರ ಬಡ್ಡಿಯನ್ನು ಪಾವತಿಸಬೇಕು. • ನಬಾರ್ಡ್ ಗುರುತಿಸಿದ ಕೃಷಿ / ಕೃಷಿ ಸಂಬಂಧಿತ ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲಗಳ ಪೈಕಿ ಲಘು ನೀರಾವರಿ, ಭೂ ಅಭಿವೃದ್ಧಿ, ಕೃಷಿ ಯಾಂತ್ರೀಕರಣ, ಪ್ಲಾಂಟೇಷನ್ ಹಾಗೂ ತೋಟಗಾರಿಕೆ ಅಭಿವೃದ್ಧಿ, ಸಾವಯವ ಕೃಷಿ, ಪಶುಸಂಗೋಪನೆ ಹಾಗೂ ಹೈನುಗಾರಿಕೆ, ಮೀನು ಕೃಷಿ, ರೇಷ್ಮೆ ಕೃಷಿ, ಜೇನು ಸಾಕಾಣಿಕೆ ಉದ್ದೇಶಗಳಿಗೆ ರೈತರಿಗೆ ನೀಡಲಾಗುವ ಸಾಲಗಳಿಗೆ ಮಾತ್ರ ಅನ್ವಯವಾಗುತ್ತದೆ. ಈ ಯೋಜನೆಯು ಕೊಯ್ಲು ವರೆಗಿನ ಮತ್ತು ಕೊಯ್ಲು ನಂತರದ ಕೃಷಿ ಚಟುವಟಿಕೆಗಳಿಗೆ ಅಂದರೆ ಮಾರುಕಟ್ಟೆಗೆ ಕೃಷಿ ಉತ್ಪನ್ನ ಸಿದ್ಧವಾಗುವ ಹಂತದ ವರೆಗೆ (threshing, winnowing, cleaning, grading, drying) ಅವಶ್ಯವಿರುವ ಕೃಷಿ ಯಂತ್ರೋಪಕರಣ/ಘಟಕಗಳನ್ನು ಹೊಂದಲು ನೀಡುವ ಸಾಲಗಳಿಗೂ ಸಹ ಅನ್ವಯವಾಗುತ್ತದೆ. ದ್ವಿಚಕ್ರ ವಾಹನ, ಜೀಪು, ಪಿಕಪ್ ವ್ಯಾನ್ ಹಾಗೂ ಇನ್ನು ಮುಂತಾದ ಯಾವುದೇ ಕೃಷಿ ಸಾಗಾಣಿಕೆಗೆ ಬಳಸುವ ವಾಹನ ಸಾಲಗಳಿಗೆ, ತೋಟದ ಮನೆ, ಗ್ರಾಮೀಣ ಗೋದಾಮುಗಳಿಗೆ, ದ್ವಿತೀಯ ಸಂಸ್ಕರಣೆ, ಕೃಷಿ ಉತ್ಪನ್ನಗಳ ಮೌಲ್ಯ ವರ್ಧನೆ/ಆಹಾರ ಸಂಸ್ಕರಣೆ, ಕೃಷಿ ಕ್ಲಿನಿಕ್‌ಗೆ ನೀಡುವ ಸಾಲಗಳಿಗೆ ಈ ಯೋಜನೆ ಅನ್ವಯವಾಗುವುದಿಲ್ಲ.
ಆ)	ಸಹಕಾರ ಬ್ಯಾಂಕ್‌ಗಳಿಂದ ಕೃಷಿಯೇತರ ಉದ್ದೇಶಕ್ಕಾಗಿಯೂ ಸಾಲ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು:	ಹೌದು, ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳು ಭಾರತೀಯ ರಿಸರ್ವ್ ಬ್ಯಾಂಕ್‌ನಿಂದ ಬ್ಯಾಂಕಿಂಗ್ ವ್ಯವಹಾರ ನಡೆಸಲು ಪರವಾನಗಿ ಪಡೆದಿದ್ದು, ಭಾರತೀಯ ರಿಸರ್ವ್ ಬ್ಯಾಂಕ್ ಮತ್ತು ನಬಾರ್ಡ್ ನಿಯಮಾವಳಿಗಳನ್ವಯ ಕೃಷಿಯೇತರ ಉದ್ದೇಶಗಳಿಗೆ ಸಾಲ ನೀಡಲು ಅವಕಾಶ ಇರುತ್ತದೆ. ಕರ್ನಾಟಕ ರಾಜ್ಯ ಕೃಷಿ ಮತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಭಾರತೀಯ ರಿಸರ್ವ್ ಬ್ಯಾಂಕ್‌ನಿಂದ ಬ್ಯಾಂಕಿಂಗ್ ವ್ಯವಹಾರ ನಡೆಸಲು ಪರವಾನಗಿ ಪಡೆಯದಿದ್ದರೂ ಸಹ ತಮ್ಮ ಬೈಲಾದನ್ವಯ ಕೃಷಿಯೇತರ ಸಾಲ ನೀಡಲು ಅವಕಾಶ ಮಾಡಿಕೊಂಡಿರುತ್ತದೆ. ಸಹಕಾರ ಬ್ಯಾಂಕುಗಳು, ಕೃಷಿಯೇತರ ಸಾಲ ನೀಡಲು ನಿಯಮಗಳನ್ವಯ ಅವಕಾಶವಿರುವುದರಿಂದ ಸರ್ಕಾರದಿಂದ ತಡೆಯುವ ಪ್ರಶ್ನೆ ಉದ್ಭವಿಸುವುದಿಲ್ಲ.

ಇ)	ಕಳೆದ 2 ವರ್ಷಗಳಿಂದ ಸಹಕಾರ ಬ್ಯಾಂಕ್‌ಗಳಲ್ಲಿ ಅವ್ಯವಹಾರ ನಡೆಸಿರುವ ಸಂಖ್ಯೆ ಎಷ್ಟು ಹಾಗೂ ಆ ಪ್ರಕರಣಗಳು ಯಾವ ಹಂತದಲ್ಲಿದೆ;	ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ಗಳಲ್ಲಿ ಕಳೆದ ಎರಡು ವರ್ಷಗಳಿಂದ ಅವ್ಯವಹಾರ ನಡೆದಿರುವ ಬಗ್ಗೆ ದಾಖಲಾದ ವಿವರವನ್ನು ಈ ಕೆಳಗೆ ನೀಡಲಾಗಿದೆ.

(ರೂ.ಲಕ್ಷಗಳಲ್ಲಿ)

ಬ್ಯಾಂಕಿನ ಹೆಸರು	ಅವ್ಯವಹಾರ ನಡೆದ ಸಂಖ್ಯೆ	ಭಾಗಿಯಾದ ಸಿಬ್ಬಂದಿ ಸಂಖ್ಯೆ	ಅವ್ಯವಹಾರದ ಮೊತ್ತ	ವಸೂಲಾದ ಮೊತ್ತ	ಸಿವಿಲ್/ಕ್ರಿಮಿನಲ್ ಕ್ರಮ ಜರುಗಿಸಿರುವ ಸಂಖ್ಯೆ
ಕಲಬುರ್ಗಿ ಮತ್ತು ಯಾದಗಿರಿ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್	1	2	35.00	35.00	2 ಜನ ಸಿಬ್ಬಂದಿಗಳನ್ನು ದಿ.3-9-2020 ರಂದು ಅಮಾನತ್ತುಗೊಳಿಸಿ ಆಂತರಿಕ ವಿಚಾರಣೆಯನ್ನು ಪ್ರಾರಂಭಿಸಲಾಗಿದೆ. ಒಬ್ಬ ಸಿಬ್ಬಂದಿಯನ್ನು ದಿ:30.06.2021 ಮತ್ತು ಮತ್ತೊಬ್ಬ ಸಿಬ್ಬಂದಿಯನ್ನು ದಿ.23-6-2021 ರಂದು ಪುನರ್ ಸ್ಥಾಪಿಸಲಾಗಿದೆ. ಅಳಂದ ಪೋಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲು ಸಂಪರ್ಕಿಸಲಾಗಿ ಹೆಚ್ಚಿನ ದಾಖಲೆಗಳನ್ನು ಸಲ್ಲಿಸಲು ತಿಳಿಸಲಾಗಿದೆ.
ಮೈಸೂರು ಮತ್ತು ಚಾಮರಾಜ ನಗರ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್	2	9	220.13	0.00	ಹುಣಸೂರು ಪೋಲೀಸ್ ಠಾಣೆಯಲ್ಲಿ ದಿ. 17-09-2018 ರಂದು 3 ಸಿಬ್ಬಂದಿಗಳ ವಿರುದ್ಧ ಕ್ರಿಮಿನಲ್ ಪ್ರಕರಣ ಸಂಖ್ಯೆ:CR.377/2018 ದಾಖಲಾಗಿದ್ದು ದೋಷಾರೋಪಣಪಟ್ಟಿ ಸಲ್ಲಿಸಲಾಗಿದೆ. ಬೆಳಿಕೆರೆ ಪೋಲೀಸ್ ಠಾಣೆಯಲ್ಲಿ ದಿ. 17-09-2018 ರಂದು ಒಬ್ಬ ಸಿಬ್ಬಂದಿ ವಿರುದ್ಧ ಕ್ರಿಮಿನಲ್ ಪ್ರಕರಣ ಸಂಖ್ಯೆ CR.343/2018 ದಾಖಲಾಗಿದ್ದು, ತನಿಖೆ ಪ್ರಗತಿಯಲ್ಲಿರುತ್ತದೆ.

							9 ಜನ ಸಿಬ್ಬಂದಿಗಳನ್ನು ಅಮಾನತ್ತುಗೊಳಿಸಿ ಆಂತರಿಕ ವಿಚಾರಣೆಯನ್ನು ಪ್ರಾರಂಭಿಸಲಾಗಿದ್ದು, 5 ಸಿಬ್ಬಂದಿಯನ್ನು 9.05.2020 ರಂದು ಪುನರ್ ಸ್ಥಾಪಿಸಲಾಗಿದೆ. 9 ಜನ ಸಿಬ್ಬಂದಿಗಳ ಮೇಲೆ ವಸೂಲಾತಿಗಾಗಿ ಸಹಕಾರ ಸಂಘಗಳ ಜಂಟಿ ನಿಬಂಧಕರು ಮೈಸೂರು ಪ್ರಾಂತ, ಮೈಸೂರು, ರಲ್ಲಿ ಅಧಿಭಾರ ಪ್ರಕರಣವನ್ನು ದಾಖಲಿಸಲಾಗಿದೆ.
		ಕೊಡಗು ಡಿಸಿಸಿ ಬ್ಯಾಂಕ್	2	2	5.09	5.09	ಶನಿವಾರಸಂತೆ ಶಾಖೆಯಲ್ಲಿ ಒಬ್ಬ ಸಿಬ್ಬಂದಿಯನ್ನು ದಿನಂಕ:15.12.2018 ರಂತೆ ಬ್ಯಾಂಕಿನ ಕರ್ತವ್ಯದಿಂದ ಕಡ್ಡಾಯ ನಿವೃತ್ತಿಗೊಳಿಸಲಾಗಿದೆ. ಕಡಂಗ ಶಾಖೆಯಲ್ಲಿ ಒಬ್ಬ ಸಿಬ್ಬಂದಿಯನ್ನು ದಿ.22.11.2019 ರಂದು ಬ್ಯಾಂಕಿನ ಕರ್ತವ್ಯದಿಂದ ವಜಾಗೊಳಿಸಲಾಗಿದೆ.
		ಒಟ್ಟು	**5**	**13**	**260.22**	**40.09**	
ಈ)	ಕಳೆದ 03 ವರ್ಷಗಳಿಂದ ಸಹಕಾರ ಇಲಾಖೆಯಿಂದ ಎಷ್ಟು ಮೊತ್ತದ ಹಣವನ್ನು ರೈತರಿಗೆ ಸಾಲವಾಗಿ ನೀಡಲು ಬಿಡುಗಡೆ ಮಾಡಲಾಗಿದೆ ಹಾಗೂ ಕಳೆದ 03 ವರ್ಷಗಳಲ್ಲಿ ಎಷ್ಟು ರೈತರಿಗೆ ಒಟ್ಟು ಎಷ್ಟು ಮೊತ್ತದ	ಸರ್ಕಾರದಿಂದ ಕಳೆದ ಮೂರು ವರ್ಷಗಳಲ್ಲಿ ಕಸ್ಕಾರ್ಡ್ ಬ್ಯಾಂಕಿಗೆ ಮಾತ್ರ ಪಿಕಾರ್ಡ್ ಬ್ಯಾಂಕುಗಳ ಮೂಲಕ ರೈತ ಸದಸ್ಯರಿಗೆ ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಸಾಲ ನೀಡಲು ರೂ.24.56 ಕೋಟಿಗಳನ್ನು ಸಾಲದ ರೂಪದಲ್ಲಿ ನೀಡಲಾಗಿದೆ. ಸಹಕಾರ ಇಲಾಖೆಯಿಂದ ಜಿಲ್ಲಾ ಸಹಕಾರ ಬ್ಯಾಂಕುಗಳು ರೈತರಿಗೆ ಸಾಲ ವಿತರಿಸಲು ಯಾವುದೇ ಸಾಲವನ್ನು ನೀಡಲಾಗುವುದಿಲ್ಲ. ಈ ಬ್ಯಾಂಕುಗಳು ನಬಾರ್ಡ್, ಅಪೆಕ್ಸ್ ಬ್ಯಾಂಕ್ ಮತ್ತು ತಮ್ಮ ಸ್ವಂತ ಸಂಪನ್ಮೂಲದಿಂದ ರೈತರಿಗೆ ಸಾಲ ವಿತರಿಸಿ ರೈತರು ನಿಗದಿತ ಅವಧಿಯಲ್ಲಿ ಸಾಲ ಮರುಪಾವತಿಸಿದಲ್ಲಿ ಮಾತ್ರ ರೈತರ ಪರವಾಗಿ ಈ ಬ್ಯಾಂಕುಗಳಿಗೆ ಬಡ್ಡಿ ಸಹಾಯಧನವನ್ನು ನೀಡಲಾಗುತ್ತಿದೆ.					

	ಸಾಲವನ್ನು ವಿತರಿಸಲಾಗಿದೆ (ಜಿಲ್ಲಾವಾರು ವಿವರ ನೀಡುವುದು)	ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳು ಮತ್ತು ಕಸ್ಕಾರ್ಡ್ ಬ್ಯಾಂಕ್ ಕಳೆದ 3 ವರ್ಷಗಳಲ್ಲಿ ರೈತರಿಗೆ ವಿತರಿಸಿದ ಒಟ್ಟು ಸಾಲದ ವಿವರವನ್ನು ಈ ಕೆಳಗೆ ನೀಡಿದ್ದು, ಜಿಲ್ಲಾವಾರು ವಿವರವನ್ನು **ಅನುಬಂಧ**ದಲ್ಲಿ ನಿಡಲಾಗಿದೆ.

(ರೂ.ಕೋಟಿಗಳಲ್ಲಿ)

ಕ್ರ ಸಂ	ಸಾಲದ ವಿಧ	2018–19		2019–20		2020–21	
		ಸಂಖ್ಯೆ	ಮೊತ್ತ	ಸಂಖ್ಯೆ	ಮೊತ್ತ	ಸಂಖ್ಯೆ	ಮೊತ್ತ
1	ಅಲ್ಪಾವಧಿ ಕೃಷಿ ಸಾಲ	19,58,926	10,648.84	22,41,057	12,841.22	25,69,134	16,926.44
2	ಮಧ್ಯಮಾವಧಿ ಹಾಗೂ ದೀರ್ಘಾವಧಿ ಕೃಷಿ ಸಾಲ(ಡಿಸಿಸಿ ಬ್ಯಾಂಕುಗಳ ಮೂಲಕ)	27,231	691.46	28,195	770.40	31,598	957.45
3	ಮಧ್ಯಮಾವಧಿ ಹಾಗೂ ದೀರ್ಘಾವಧಿ ಕೃಷಿ ಸಾಲ (ಕಸ್ಕಾರ್ಡ್ ಬ್ಯಾಂಕಿನ ಮೂಲಕ)	16,736	233.77	18,451	264.63	22,437	411.13
	ಒಟ್ಟು	**20,02,893**	**11,574.07**	**22,87,703**	**13,876.25**	**26,23,169**	**18,295.02**

ಸಂಖ್ಯೆ: ಸಿಒ 361 ಸಿಎಲ್‌ಎಸ್ 2021

(ಎಸ್.ಟಿ. ಸೋಮಶೇಖರ್)

ಸಹಕಾರ ಸಚಿವರು

ಮಾನ್ಯವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ.ನಾರಾಯಣ ಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 248 ಕ್ಕೆ ಅನುಬಂಧ

ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳು ಮತ್ತು ಕಸ್ಕಾರ್ಡ್ ಬ್ಯಾಂಕ್ ಕಳೆದ 3 ವರ್ಷಗಳಲ್ಲಿ ರೈತರಿಗೆ ವಿತರಿಸಿದ ಒಟ್ಟು ಸಾಲದ ವಿವರ (ರೂ.ಲಕ್ಷಗಳಲ್ಲಿ)

		2018–19		2019–20		2020–21	
ಕ್ರ. ಸಂ	ಜಿಲ್ಲೆಯ ಹೆಸರು	ಸಂಖ್ಯೆ	ಮೊತ್ತ	ಸಂಖ್ಯೆ	ಮೊತ್ತ	ಸಂಖ್ಯೆ	ಮೊತ್ತ
1	ಬೆಳಗಾವಿ	348475	142986.77	381411	192620.85	434610	227911.12
2	ವಿಜಯಪುರ	166154	86686.88	174699	103718.49	228336	131149.75
3	ಬಾಗಲಕೋಟೆ	224027	111149.68	251975	120536.11	239127	135622.05
4	ಧಾರವಾಡ	20994	9055.74	25020	11220.38	27315	15898.43
5	ಗದಗ	19731	8353.41	24610	11029.46	28148	16281.73
6	ಹಾವೇರಿ	22605	9386.48	31297	12553.86	38037	18923.26
7	ಉತ್ತರ ಕನ್ನಡ	97281	86667.41	96734	83839.53	97207	89439.20
8	ಬಳ್ಳಾರಿ	50118	38973.69	71293	61334.26	93084	78005.76
9	ಬೀದರ	152892	80276.53	140714	74467.06	156756	87258.80
10	ಕಲಬುರಗಿ	56812	17390.81	17979	5039.19	21783	8033.92
11	ಯಾದಗಿರ	30824	7588.36	12616	3294.29	20010	6385.05
12	ರಾಯಚೂರು	69877	32993.65	90285	44039.06	100137	52284.37
13	ಕೊಪ್ಪಳ	25829	11291.09	36288	16477.16	38815	20589.26
14	ಮೈಸೂರು	37061	36317.57	44912	41421.85	64002	62244.45
15	ಚಾಮರಾಜನಗರ	11354	9161.46	15189	11583.61	22903	18393.66
16	ಮಂಡ್ಯ	70580	35989.15	127305	67935.45	143396	82311.85
17	ಹಾಸನ	117406	50192.82	128441	66090.24	145901	78158.55
18	ಚಿಕ್ಕಮಗಳೂರು	36947	44809.06	41611	49220.62	45924	75752.61
19	ಕೊಡಗು	36327	55590.50	37413	58306.20	39310	63197.78
20	ದಕ್ಷಿಣ ಕನ್ನಡ	81603	121638.94	88560	129987.58	96067	175333.39
21	ಉಡುಪಿ	27462	30658.57	30053	33786.57	40173	51818.38
22	ಬೆಂಗಳೂರು ನಗರ, ಗ್ರಾಮಾಂತರ,ರಾಮನಗರ	52591	1869.14	88801	1399.83	96023	56998.32
25	ಕೋಲಾರ	9809	14219.74	12322	17999.14	17543	23997.63
26	ಚಿಕ್ಕಬಳ್ಳಾಪುರ	13230	15732.74	17590	21256.16	22560	26772.99
27	ತುಮಕೂರು	37930	15006.32	76497	34740.54	111580	56371.32
28	ಚಿತ್ರದುರ್ಗ	27569	16521.79	42747	26105.68	53996	37040.87
29	ದಾವಣಗೆರೆ	57613	19573.42	88988	34253.28	100315	52535.65
30	ಶಿವಮೊಗ್ಗ	99792	47325.20	92353	53367.61	100111	80791.72
	ಒಟ್ಟು	2002893	1157406.92	2287703	1387624.06	2623169	1829501.87